**ಓ.ಎಸ್. ನಂ. 128/2023** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ 4.4.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರಿದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ನನ್ನ ತಂದೆಗೆ ಸಂಬಂಧಪಟ್ಟ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 22 ಎಂದು, ಒಂದು ಮುಟೇಶನ್ ರಿಜಿಸ್ಟರ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ 23 ಎಂದು ಗುರುತಿಸಲಾಯಿತು . ನಾನು ಈ ಹಿಂದೆ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದಾಗ ನನ್ನ ತಂದೆ 1997 ರಲ್ಲಿ ತೀರಿಕೊಂಡಿರುತ್ತಾರೆ ಎಂದು ಹೇಳಿದ್ದು, ನನ್ನ ತಂದೆ 1993 ರಲ್ಲಿ ತೀರಿಕೊಂಡಿರುತ್ತಾರೆ.

ಪ್ರತಿವಾದಿ ಪರ ವಕೀಲರು ಗೈರುಹಾಜರಾದ ಕಾರಣ ಪಾಟೀಸವಾಲನ್ನು ಮುಂದೂಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.